# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 437

2) ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 15/09/2022

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1. | ಬೀದರ್ ಜಿಲ್ಲೆಯಲ್ಲಿ ಹಗಲಿರುಳು ಸಾರ್ವಜನಿಕರ ಸೇವೆಯಲ್ಲಿ ತೊಡಗಿರುವ ಪೊಲೀಸ್ ಸಿಬ್ಬಂದಿಗಳ ವಸತಿ ಗೃಹಗಳು ಶಿಥಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯಲ್ಲಿ ಪೊಲೀಸ್ ವಸತಿ ಗೃಹಗಳು ಶಿಥಿಲಾವಸ್ಥೆಯಲ್ಲಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಬೀದರ್ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಶಿಥಿಲಾವಸ್ಥೆಯಲ್ಲಿರುವ ಪೊಲೀಸ್ ವಸತಿಗೃಹಗಳನ್ನು ನೆಲಸಮಗೊಳಿಸಲು ಇಲಾಖೆಯಲ್ಲಿ ಪ್ರಸ್ತಾವನೆ ಸ್ವೀಕರಿಸಿದೆ ಹಾಗೂ ಇದುವರೆವಿಗೂ 295 ವಸತಿಗೃಹಗಳನ್ನು ನೆಲಸಮಗೊಳಿಸಲು ಅನುಮತಿ ನೀಡಲಾಗಿದೆ. |
| 2. | ಬಂದಿದ್ದಲ್ಲಿ, ಸದರಿಯವರಿಗೆ ಹೊಸ ಕಟ್ಟಡಗಳನ್ನು ನಿರ್ಮಿಸಿಕೊಡುವುದು ಯಾವಾಗ; ಇದಕ್ಕಾಗಿ ಸರ್ಕಾರ ಅನುದಾನ ಘೋಷಣೆ ಮಾಡಿದೆಯೇ; ಮಾಡಿದ್ದಲ್ಲಿ, ಘೋಷಣೆ ಮಾಡಲಾದ ಹಾಗೂ ಬಿಡುಗಡೆ ಮಾಡಲಾದ ಅನುದಾನ ಎಷ್ಟು; | ಪೊಲೀಸ್ ಗೃಹ 2025 ಯೋಜನೆಯಡಿ ಬೀದರ್ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಒಟ್ಟು 504 ಪೊಲೀಸ್ ಸಿಬ್ಬಂದಿ ವಸತಿಗೃಹಗಳನ್ನು ನಿರ್ಮಾಣ ಮಾಡಲು ಪರಿಗಣಿಸಲಾಗಿದೆ.<br>ಪ್ರಸ್ತುತ ಸದರಿ ಯೋಜನೆಯಡಿ ಹಂತ-1 ರಲ್ಲಿ ಬೀದರ್ ಜಿಲ್ಲೆಯಲ್ಲಿ ಕೈಗೊಂಡಿರುವ ಹೊಸ ಪೊಲೀಸ್ ವಸತಿ ಗೃಹಗಳ ವಿವರಗಳು ಕೆಳಗಿನಂತಿರುತ್ತದೆ.<br>1) ಬೀದರ್ ಜಿಲ್ಲೆಯ ಅಬ್ದುಲ್ ಫೈಯಾಜ್ ದರ್ಗದಲ್ಲಿ 36 ಪೊಲೀಸ್ ವಸತಿ ಗೃಹಗಳ ನಿರ್ಮಾಣ ಕಾಮಗಾರಿ-ಅಂದಾಜು ಮೊತ್ತ ರೂ. 1055.88 ಲಕ್ಷಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ.<br>2) ಬೀದರ್ ಜಿಲ್ಲೆಯ ಹುಮನಾಬಾದ್‌ನಲ್ಲಿ 36 ಪೊಲೀಸ್ ವಸತಿ ಗೃಹಗಳ ನಿರ್ಮಾಣ ಕಾಮಗಾರಿ-ಅಂದಾಜು ಮೊತ್ತ ರೂ.944.12 ಲಕ್ಷಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ.<br>ಬಾಕಿ ಉಳಿದ ವಸತಿಗೃಹಗಳ ನಿರ್ಮಾಣ ಕಾಮಗಾರಿಯನ್ನು ಅನುದಾನ ಲಭ್ಯತೆಯ ಮೇಲೆ ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ನಿರ್ಮಾಣ ಮಾಡಲು ಪರಿಶೀಲಿಸಲಾಗುವುದು. |
| 3. | ಎಷ್ಟು ವರ್ಷಗಳಲ್ಲಿ ಪೊಲೀಸ್ ಸಿಬ್ಬಂದಿಗಳ ವಸತಿ ಗೃಹಗಳ ಕಾಮಗಾರಿಯನ್ನು ಮುಗಿಸಲು ಕಾಲಮಿತಿ ನಿಗದಿಪಡಿಸಲಾಗಿತ್ತು; ವಿಳಂಬಕ್ಕೆ ಕಾರಣವೇನು? | ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಗೃಹ 2025 ಯೋಜನೆಯಡಿ ಪ್ರಸ್ತುತ ಮೇಲೆ ತಿಳಿಸಿರುವ 02 ಸ್ಥಳಗಳಲ್ಲಿ ನಿರ್ಮಾಣ ಹಂತದಲ್ಲಿರುವ ಕಾಮಗಾರಿಗಳಿಗೆ ಸುಮಾರು 18 ತಿಂಗಳು ಕಾಲಮಿತಿಯನ್ನು ನಿಗಧಿಪಡಿಸಲಾಗಿದೆ. ಸದರಿ ಕಾಮಗಾರಿಯಲ್ಲಿ ಯಾವುದೇ ವಿಳಂಬವಾಗಿರುವುದಿಲ್ಲ ಹಾಗೂ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲಾಗುವುದು. |

**ಸಂಖ್ಯೆ: ಹೆಚ್‌ಡಿ 82 ಪಿಬಿಎಲ್ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು